ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ. 1.00 ಲಕ್ಷ ಮೀರಿದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳು ಶುಲ್ಕವನ್ನು ಭರಿಸುತ್ತವೆ.

ಆ) ಉದ್ಭವಿಸುವುದಿಲ್ಲ

ಇ) ದೊರೆತಿದೆ

626 (627) ಶ್ರೀ ಧ್ರುವನಾರಾಯಣ, ಆರ್.(ಸಂತೇಮರಳ್ಳಿ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖಾವತಿಯಿಂದ ನಡೆಸಲಾಗುತ್ತಿರುವ ಪೋಸ್ಟ್ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ;

ಆ) ಇವುಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ವಿದ್ಯಾರ್ಥಿನಿಲಯಗಳೆಷ್ಟು;

ಇ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳೆಷ್ಟು;

ಈ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳಿಗೆ ಮಾಹೆಯಾನ ಒಟ್ಟು ಎಷ್ಟು ಬಾಡಿಗೆಯನ್ನು ಪಾವತಿಸಲಾಗುತ್ತಿದೆ.

ಉ) 2007–08 ನೇ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಉದ್ದೇಶಿಸಲಾಗಿದೆ ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :–

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆವತಿಯಿಂದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ 291 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದೆ.

ಆ) ಇವುಗಳಲ್ಲಿ 157 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿರುತವೆ.

ಇ) ಬಾಡಿಗೆ ಕಟ್ಟಡಗಳಲ್ಲಿ 134 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.

ಈ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿನಿಲಯಗಳಿಗೆ ಮಾಹೆಯಾನ ಲೋಕೋಪಯೋಗಿ ಇಲಾಖೆಯು ನಿಗದಿಪಡಿಸಿದ ದರದನ್ವಯ ಒಟ್ಟು ರೂ. 6,90,636 ಗಳನ್ನು ಪಾವತಿಸಲಾಗುತ್ತಿದೆ.

ಉ) 2007–08ನೇ ಸಾಲಿನಲ್ಲಿ 10 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಕಟ್ಟಡಗಳನ್ನು ನಿರ್ಮಿಸಲು ಗುರಿಹೊಂದಿದ್ದು ನಿವೇಶನ ಹಾಗೂ ಅನುದಾನದ ಲಭ್ಯತೆಯನ್ನು ಅನುಸರಿಸಿ ಹೆಚ್ಚುವರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುವುದು.